



ಅರುಣ ಪಿ. ಭಟ್ಟ

## ವಾರಭವಿಷ್ಯ 15.09.2022ರಿಂದ 21.09.2022ರವರೆಗೆ




ನೀವು ಕೈಗೊಳ್ಳುವ ಕೆಲಸದಿಂದ ವಿಶ್ವಾಸಾರ್ಹತೆ ಹೆಚ್ಚಾಗುತ್ತದೆ. ಆದರೆ ಕೆಲವರು ನಿಮ್ಮನ್ನು ಅವಮಾನಕ್ಕೆ ಗುರಿ ಮಾಡಲಿದ್ದಾರೆ. ನಿಮ್ಮ ಕೆಲಸದ ಜತೆಜತೆಗೆ ಆಹಾರ ಪಥ್ಯದ ಬಗ್ಗೆಯೂ ಕಾಳಜಿ ತೆಗೆದುಕೊಳ್ಳುತ್ತೀರಿ. ಸಮಯವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವಲ್ಲಿ ಯಶಸ್ಸು ಕಾಣುತ್ತೀರಿ. ವ್ಯಾಪಾರಸ್ಥರಿಗೆ ಉತ್ತಮ ಲಾಭ. ಶುಭದಿನ 16. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ನಿಮ್ಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚಾಗುತ್ತದೆ. ಕೋರ್ಟ್ ಕೇಸುಗಳಲ್ಲಿ ಸಮಸ್ಯೆಗಳನ್ನು ಎದುರಿಸುತ್ತೀರಿ. ವಿರೋಧಿ ಪಾಳಯದ ಪಿತೂರಿಯಿಂದ ಹಿನ್ನಡೆ ಅನುಭವಿಸಬೇಕಾಗುತ್ತದೆ. ವಾತಾವರಣದಲ್ಲಿನ ಬದಲಾವಣೆಯಿಂದ ದೈಹಿಕವಾಗಿ ಅನಾರೋಗ್ಯ ಕಾಡಬಹುದು. ಸದಾ ಜತೆಗೆ ಇರುವವರೇ ನಿಂದಿಸುವ ಸಾಧ್ಯತೆ ಇದೆ. ಶುಭದಿನ 20. ಕಾಲಭೈರವನ ಸೇವೆ ಮಾಡಿರಿ.




ವಾರದ ಆರಂಭದಿಂದಲೇ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕಾಗುತ್ತದೆ. ಸಂಬಂಧಿಕರ ಜತೆಗೆ ಉತ್ತಮ ಸಮಯ ಕಳೆಯುವ ಸಾಧ್ಯತೆ ಇದೆ. ವ್ಯವಹಾರದಲ್ಲಿ ಬಹಳ ಎಚ್ಚರಿಕೆಯಿಂದ ವ್ಯವಹರಿಸಿ. ಈ ವಾರ ಸ್ವಲ್ಪ ಹೆಚ್ಚೇ ಹಣ ಖರ್ಚು ಮಾಡಬೇಕಾಗುತ್ತದೆ. ತಲೆ ನೋವು ಹಲ್ಲು ನೋವು ಕಾಡಬಹುದು. ಸೋದರ ಸಂಬಂಧಿಗಳ ಜತೆಗೆ ಜಗಳ ಆಗುವ ಸಾಧ್ಯತೆಗಳಿವೆ. ಶುಭದಿನ 21. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




ವಯಸ್ಕ ಮಗ ಅಥವಾ ಮಗಳು ಇದ್ದಲ್ಲಿ ಅವರ ಮದುವೆ ವಿಚಾರವಾಗಿ ಸಂಬಂಧಿಕರ ಜತೆಗೆ ಮಾತುಕತೆ ನಡೆಸಲಿದ್ದೀರಿ. ಈ ವಾರ ಹಲವು ತುರ್ತು ಕೆಲಸಗಳನ್ನು ಪೂರ್ಣಗೊಳಿಸುವಲ್ಲಿ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ಇದಕ್ಕಾಗಿ ಕೆಲವು ಸಂಸ್ಥೆ ಅಥವಾ ವ್ಯಕ್ತಿಗಳ ಸಹಾಯ ಪಡೆಯುವ ಸಾಧ್ಯತೆ ಇದೆ. ಕೆಲವು ಆರೋಗ್ಯ ಸಮಸ್ಯೆಗಳು ನಿಮ್ಮನ್ನು ಕಾಡಬಹುದು. ಶುಭದಿನ 18. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಕ್ಕೆ ವೇಗ ನೀಡಲು ಬಹಳ ಪ್ರಯತ್ನ ಮಾಡುತ್ತೀರಿ. ನೀವು ಹಾಕಿದ ಶ್ರಮಕ್ಕೆ ತಕ್ಕ ಪ್ರತಿಫಲವನ್ನು ಪಡೆಯಲಿದ್ದೀರಿ. ಇತರರ ಸಮಸ್ಯೆಗಳನ್ನು ಬಗೆಹರಿಸಲು ಹೊಸ ದಾರಿಗಳನ್ನು ಸೂಚಿಸುತ್ತೀರಿ. ನೀವು ಕೆಲಸ ಮಾಡುವ ರೀತಿಗೆ ಸಹೋದ್ಯೋಗಿಗಳು, ಮೇಲಧಿಕಾರಿಗಳ ಜವಾಬ್ದಾರಿ ಎಚ್ಚರಗೊಳ್ಳುತ್ತದೆ. ಈ ಉಡುಗೊರೆ ಸಿಗುವ ಸಾಧ್ಯತೆ ಇದೆ. ಶುಭದಿನ 19. ಲಿಂಗಾಷ್ಟಕ ಪಠಣ ಮಾಡಿರಿ.




ನಿಮ್ಮ ವಿವೇಚನೆಯನ್ನು ಸಮರ್ಥವಾಗಿ ಬಳಸುವ ಮೂಲಕ ವ್ಯಾಪಾರ ಇನ್ನಷ್ಟು ಉತ್ತಮವಾಗಿ ಮಾಡುತ್ತೀರಿ. ಈ ಅವಧಿಯಲ್ಲಿ ಕುಟುಂಬ ಸದಸ್ಯರ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಉದ್ಯೋಗಸ್ಥರಿಗೆ ಉದ್ಯೋಗ ಸ್ಥಳದಲ್ಲಿ ಸಹೋದ್ಯೋಗಿಗಳ ಜತೆಗೆ ಉದ್ವಿಗ್ನವಾದ ಸನ್ನಿವೇಶ ಎದುರಾಗುತ್ತದೆ. ಈ ಅವಧಿಯಲ್ಲಿ ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಶುಭದಿನ 20. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಈ ವಾರ ಕೌಟುಂಬಿಕ ಹಾಗೂ ವೈಯಕ್ತಿಕ ಸಮಸ್ಯೆಗಳ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಿ. ಸಣ್ಣ ವಿಚಾರ ಕೂಡ ದೊಡ್ಡ ಬಿಕ್ಕಟ್ಟಾಗಿ ಎದ್ದು ನಿಲ್ಲುವ ಸಾಧ್ಯತೆ ಇದೆ. ಕೌಟುಂಬಿಕ ವಿಚಾರದಲ್ಲಿ ಕ್ರಮೇಣವಾಗಿ ಪ್ರಗತಿ ಕಾಣುತ್ತದೆ. ವಾರದ ದ್ವಿತೀಯಾರ್ಧದಲ್ಲಿ ದಾನ ಧರ್ಮ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತೀರಿ. ವಾರದ ಅಂತ್ಯಕ್ಕೆ ಸರಿಯುತ್ತಾ ಉತ್ತಮ ಫಲಿತಾಂಶ ದೊರೆಯಲಿದೆ. ಶುಭದಿನ 18. ಸೌಂದರ್ಯ ಲಹರಿ ಪಠಿಸಿರಿ.




ವಾರದ ಮೊದಲ ಭಾಗದಿಂದಲೇ ಆರೋಗ್ಯವಾಗಿ ಇರುತ್ತೀರಿ. ವ್ಯವಹಾರವೊಂದರ ಮುಖ್ಯ ಸ್ಥಾನಕ್ಕೆ ನೇಮಕ ಸಾಧ್ಯತೆ ಇದೆ. ರಾಜಕಾರಣಿಗಳಿಗೆ ಹೆಚ್ಚಿನ ಜವಾಬ್ದಾರಿ ವಹಿಸಿಕೊಳ್ಳಬೇಕಾಗುತ್ತದೆ. ಉದ್ಯೋಗ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಾರದ ಅಂತ್ಯ ಭಾಗದಲ್ಲಿ ವರ್ಗಾವಣೆ ಆಗುವ ಸಾಧ್ಯತೆ ಇದೆ. ನಿಮ್ಮ ಕೆಲಸವನ್ನು ಪರಿಣಾಮಕಾರಿಯಾಗಿ ಮಾಡಲಿದ್ದೀರಿ. ಶುಭದಿನ 19. ಲಕ್ಷ್ಮೀ ನಾರಾಯಣ ಹೃದಯ ಪಠಿಸಿರಿ.




ನಿಮ್ಮ ಕಾರ್ಯಗಳನ್ನು ಈ ಹಿಂದೆಂದಿಗಿಂತಲೂ ವೇಗವಾಗಿ ಮಾಡಲಿದ್ದೀರಿ. ಈಗಿನ ಪರಿಸ್ಥಿತಿಯಲ್ಲಿ ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣ ಮಾಡಲು ಹೆಚ್ಚು ಹಣ ಖರ್ಚು ಮಾಡಬೇಕಾಗುತ್ತದೆ. ನಿಮ್ಮ ಮನಸಿನಲ್ಲಿ ಇರುವ ವಿಚಾರವನ್ನು ನೇರವಾಗಿ ಹೇಳಲು ಪ್ರಯತ್ನಿಸಿ. ವಾರದ ಅಂತ್ಯಕ್ಕೆ ಸರಿಯುತ್ತಾ ಉದ್ಯೋಗದ ಕಡೆಗೆ ನಿಮ್ಮ ಗಮನ ಹೆಚ್ಚಾಗುತ್ತದೆ. ಶುಭದಿನ 16. ವಿಷ್ಣು ಸಹಸ್ರನಾಮ ಓದಿರಿ.




ಈ ವಾರ ಬಹಳ ಸಂತೋಷವಾಗಿ ಇರುತ್ತೀರಿ. ಆದಾಯಕ್ಕೆ ಸಂಬಂಧಿಸಿದ ಮೂಲಗಳಿಂದ ಉತ್ತಮ ಲಾಭ ಪಡೆಯುವ ಅವಕಾಶ ಇದೆ. ಇದರಿಂದ ಹೆಚ್ಚು ಉತ್ಸಾಹಭರಿತರಾಗಿ, ಉಲ್ಲಸಿತರಾಗಿ ಕಾಣಿಸಿಕೊಳ್ಳಲಿದ್ದೀರಿ. ವಿದ್ಯಾರ್ಥಿಗಳಿಗೆ ಯಶಸ್ಸು ದೊರೆಯಲಿವೆ. ನಿಮ್ಮ ಮಗ ಅಥವಾ ಮಗಳ ಮದುವೆಯ ವಿಚಾರವನ್ನು ಅಂತಿಮಗೊಳಿಸುವ ಅವಕಾಶ ಇದೆ. ಶುಭದಿನ 21. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಿಂದಲೇ ಉದ್ಯೋಗ ಕ್ಷೇತ್ರದಲ್ಲಿ ಅದ್ಭುತವಾದ ಸಾಧನೆ ಮಾಡುವ ಅವಕಾಶಗಳಿವೆ. ವಾರದ ಆರಂಭದಲ್ಲಿ ಆರೋಗ್ಯ ಉತ್ತಮವಾಗಿ ಇರುತ್ತದೆ. ಕ ನಿಮ್ಮ ಪೋಷಕರಿಗೆ ಹೆಚ್ಚಿನ ಗೌರವ ನೀಡುತ್ತೀರಿ. ಜತೆಗೆ ಅವರ ಅಗತ್ಯಗಳನ್ನು ಪೂರೈಸುತ್ತೀರಿ. ಈ ಮೂಲಕ ಅವರ ಆಶೀರ್ವಾದ ನಿಮಗೆ ದೊರೆಯಲಿದೆ. ಆಸ್ಪತ್ರೆ, ವೈದ್ಯರ ಭೇಟಿ ಮಾಡಬೇಕಾಗುತ್ತದೆ. ಶುಭದಿನ 15. ಸುಬ್ರಮಣ್ಯ ಜಪ ಮಾಡಿರಿ.




ಸಣ್ಣ ಪ್ರವಾಸ ಮಾಡಬೇಕಾಗಿ ಬರುತ್ತದೆ. ಸಂಸ್ಥೆಯೊಂದರ ಜತೆ ಮಹತ್ತರವಾದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ. ಮನೆ ಹಾಗೂ ಕುಟುಂಬದ ಬಗ್ಗೆ ಹೆಚ್ಚು ಯೋಚನೆ ಮಾಡಲಿದ್ದೀರಿ. ಶ್ವಾಸಕೋಶ ಸಮಸ್ಯೆ ಎದುರಾಗಬಹುದು. ಆರೋಗ್ಯ ಉತ್ತಮವಾಗಿ ಇರುತ್ತದೆ. ಬಹಳ ದಿನಗಳಿಂದ ಅಂದುಕೊಳ್ಳುತ್ತಿದ್ದ ಕೆಲಸಗಳಲ್ಲಿ ಪ್ರಗತಿ ಕಾಣಿಸುತ್ತದೆ. ಶುಭದಿನ 18. ಶ್ರೀ ದುರ್ಗಾ ಆರಾಧನೆ ಮಾಡಿರಿ.